ಅಧ್ಯಕ್ಷರು : ಕೆ.ಎಸ್. ಬೀಳಗಿಯವರೊಬ್ಬರು ಮಾತ್ರ ತಟಸ್ಥರು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು : 'ಖಂಡ 2 ಮತ್ತು 3 ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ'

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಹೆಚ್. ನಾಗಪ್ಪ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) : ಮಾನ್ಯ ಅಧ್ಯಕ್ಷರೆ, 1998ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ ನಿಯಂತ್ರಣ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, '1998ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ ನಿಯಂತ್ರಣ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಕರ್ನಾಟಕ ಒಳನಾಡು ಮೀನುಗಾರಿಕೆ (ಸಂರಕ್ಷಣಾ, ಅಭಿವೃದ್ಧಿ ಮತ್ತು ನಿಯಂತ್ರಣ) ವಿಧೇಯಕ, 1996

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಕೆ. ಜಯಪ್ರಕಾಶ್ ಹೆಗಡೆ (ಬಂದರು ಮತ್ತು ಮೀನುಗಾರಿಕೆ ರಾಜ್ಯ ಸಚಿವರು) : ಮಾನ್ಯ ಅಧ್ಯಕ್ಷರೆ, "1996ರ ಕರ್ನಾಟಕ ಒಳನಾಡು ಮೀನುಗಾರಿಕೆ (ಸಂರಕ್ಷಣಾ, ಅಭಿವೃದ್ಧಿ ಮತ್ತು ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ"

ಪ್ರಸ್ತಾವ ಮಂಡಿಸಲ್ಪಟ್ಟಿತು

ಅಧ್ಯಕ್ಷರು : ಈಗ ಈ ಪ್ರಸ್ತಾವವನ್ನು ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ, '1996ರ ಕರ್ನಾಟಕ ಒಳನಾಡು ಮೀನುಗಾರಿಕೆ (ಸಂರಕ್ಷಣಾ, ಅಭಿವೃದ್ಧಿ ಮತ್ತು ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 24ರವರೆಗೆ

ಅಧ್ಯಕ್ಷರು : 'ಖಂಡ 2 ರಿಂದ 24 ರವರೆಗೆ ಹಾಗೂ ಅನುಸೂಚಿ ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ'.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 24ರವರೆಗೆ ಎರಡೂ ಸೇರಿದಂತೆ, ಹಾಗೂ ಅನುಸೂಚಿ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, 'ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಕೆ. ಜಯಪ್ರಕಾಶ್ ಹೆಗ್ಗಡೆ (ಬಂದರು ಮತ್ತು ಮೀನುಗಾರಿಕೆ ರಾಜ್ಯ ಸಚಿವರು) : ಮಾನ್ಯ ಅಧ್ಯಕ್ಷರೆ, "1996ರ ಕರ್ನಾಟಕ ಒಳನಾಡು ಮೀನುಗಾರಿಕೆ (ಸಂರಕ್ಷಣಾ, ಅಭಿವೃದ್ಧಿ ಮತ್ತು ನಿಯಂತ್ರಣ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ"

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, '1996ರ ಕರ್ನಾಟಕ ಒಳನಾಡು ಮೀನುಗಾರಿಕೆ (ಸಂರಕ್ಷಣಾ, ಅಭಿವೃದ್ಧಿ ಮತ್ತು ನಿಯಂತ್ರಣ) ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕ, 1998 ಪರ್ಯಾಲೋಚನಾ ಪ್ರಸ್ತಾವ